# ಕನ್ನಡ ವಿಶ್ವವಿದ್ಯಾಲಯ, ಹಂಪಿ

## ದಲಿತ ಸಂಸ್ಕೃತಿ ಅಧ್ಯಯನ ಪೀಠ

## ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ
## 68ನೇ ಮಹಾ ಪರಿನಿಬ್ಬಾಣ ದಿನಾಚರಣೆ

## ಮಹಾ ಮಾನವತವಾದಿ ಡಾ. ಬಿ.ಆರ್ ಅಂಬೇಡ್ಕರ್

**– ಪ್ರೊ. ಮೊಗಳ್ಳಿ ಗಣೇಶ್**

ಭಾರತೀಯ ಸಂವಿಧಾನದಲ್ಲಿ ಮನುಷ್ಯತ್ವಕ್ಕೆ, ಮನುಷ್ಯ ಸಮಾನತೆಗೆ ಮತ್ತು ಮಹಿಳೆಯರ ಘನತೆಯ ಬದುಕಿಗೆ ಅವಕಾಶ ಮಾಡಿಕೊಟ್ಟ ಮಹಾ ಮಾನವತವಾದಿ ಡಾ. ಬಿ.ಆರ್. ಅಂಬೇಡ್ಕರ್ ಎಂದು ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕರಾದ **ಪ್ರೊ. ಮೊಗಳ್ಳಿ ಗಣೇಶ್** ಅವರು ಅಭಿಪ್ರಾಯಪಟ್ಟರು.




ದಲಿತ ಸಂಸ್ಕೃತಿ ಅಧ್ಯಯನ ಪೀಠದ ವತಿಯಿಂದ ಹಮ್ಮಿಕೊಂಡಿದ್ದ ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 68ನೇ ಮಹಾ ಪರಿನಿಬ್ಬಾಣ ದಿನಾಚರಣೆ ಕಾರ್ಯಕ್ರಮಕ್ಕೆ ಪ್ರೊ. ಮೊಗಳ್ಳಿ ಗಣೇಶ್ ಅವರು ಚಾಲನೆ ನೀಡಿ ವಿಶೇಷ ಉಪನ್ಯಾಸ ನೀಡಿದರು.

ಕನ್ನಡ ವಿಶ್ವವಿದ್ಯಾಲಯದ ಪಂಪ ಸಭಾಂಗಣದಲ್ಲಿ ದಿನಾಂಕ 06ನೇ ಡಿಸೆಂಬರ್ 2024ರಂದು **ದಲಿತ ಸಂಸ್ಕೃತಿ ಅಧ್ಯಯನ ಪೀಠದ** ವತಿಯಿಂದ ಹಮ್ಮಿಕೊಂಡಿದ್ದ **ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 68ನೇ ಮಹಾಪರಿನಿಬ್ಬಾಣ ದಿನಾಚರಣೆ** ಕಾರ್ಯಕ್ರಮಕ್ಕೆ ಚಾಲನೆ ನೀಡಿ **ವಿಶೇಷ ಉಪನ್ಯಾಸ**ದಲ್ಲಿ ಮಾತನಾಡಿದರು.




ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ ಡಾ.ಡಿ.ವಿ.ಪರಮಶಿವಮೂರ್ತಿ ಅವರ ಹಾಗೂ ವೇದಿಕೆಯ ಮೇಲಿರುವ ಗಣ್ಯರು ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉಪನ್ಯಾಸಕ್ಕೆ ಚಾಲನೆ ನೀಡಿದರು.

ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಬುದ್ಧನ ಕಾರುಣ್ಯ ಮತ್ತು ವೈಜ್ಞಾನಿಕ ಮನೋಧರ್ಮಕ್ಕೆ ಒತ್ತು ನೀಡಿದ್ದಾರೆ. ಜನ ಸಾಮಾನ್ಯರ ಅಭಿವ್ಯಕ್ತಿ ಸ್ವಾತಂತ್ರ್ಯ ಹಾಗೂ ಸಮಾನತೆಗೆ ಮಹತ್ವ ನೀಡಿದ್ದಾರೆ. ಮಹಾ ಪರಿನಿರ್ವಾಣ ಎಂದರೆ ಎಚ್ಚರಿಕೆ, ಹೊಸ ಬಗೆಯ ಶೋಧ, ಸೃಷ್ಠಿ, ಆಯಾಮ, ಜ್ಞಾನೋದಯ, ಸ್ವಾತಂತ್ರ್ಯ ಎಂಬುದಾಗಿದೆ. ವಿಶಾಲಾರ್ಥದಲ್ಲಿ ನೋಡುವುದಾದರೆ

ಜೀವನದ ಲೌಖಿಕ ಜಂಜಾಟಗಳಿಂದ ಮುಕ್ತರಾಗಿ ಸ್ವಾತಂತ್ರ್ಯವನ್ನು ಪಡೆದುಕೊಳ್ಳುವುದೇ ಪರಿನಿರ್ವಾಣವಾಗಿದೆ. ಮಹಾ ಪರಿನಿರ್ವಾಣವು ಬುದ್ಧ ಮತ್ತು ಅಂಬೇಡ್ಕರ್ ಅವರಿಗೆ ಮಾತ್ರ ಸೀಮಿತವಾಗದೇ, ಪ್ರತಿಯೊಬ್ಬರಲ್ಲೂ ಎಚ್ಚರಿಕೆಯ ಪರಿನಿರ್ವಾಣ ನಿರ್ಮಾಣಗೊಳ್ಳಬೇಕು ಎಂದು ಹೇಳಿದರು.




ದಲಿತ ಸಂಸ್ಕೃತಿ ಅಧ್ಯಯನ ಪೀಠದ ವತಿಯಿಂದ ಹಮ್ಮಿಕೊಂಡಿದ್ದ ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 68ನೇ ಮಹಾ ಪರಿನಿಬ್ಬಾಣ ದಿನಾಚರಣೆ ಕಾರ್ಯಕ್ರಮದಲ್ಲಿ ಕುಲಸಚಿವರಾದ ಡಾ. ವಿಜಯ್ ಪೂಣಚ್ಚ ತಂಬಂಡ ಅವರು ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಕನ್ನಡ ವಿಶ್ವವಿದ್ಯಾಲಯದ ಕುಲಸಚಿವರಾದ **ಡಾ. ವಿಜಯ್ ಪೂಣಚ್ಚ ತಂಬಂಡ** ಅವರು ಮುಖ್ಯ ಅತಿಥಿಗಳಾಗಿ ಮಾತನಾಡುತ್ತ, ಅಂಬೇಡ್ಕರ್ ಎಲ್ಲ ವಿಷಯಗಳಲ್ಲೂ ಪರಿಣಿತರಾಗಿದ್ದಾರು. ಹಲವಾರು ಭಾಷೆಗಳನ್ನು ಕರಗತ ಮಾಡಿಕೊಂಡಿದ್ದರು. ದೇಶದ ಅರ್ಥವ್ಯವಸ್ಥೆ, ಸಾಮಾಜಿಕ ವ್ಯವಸ್ಥೆ, ಜನ ಸಮುದಾಯಗಳ ಮತ್ತು ಮಹಿಳೆಯರ ಸ್ಥಾನಮಾನ ಹೇಗಿರಬೇಕು ಎಂಬ ಸ್ಪಷ್ಟ ಕಲ್ಪನೆ ಅವರಿಗಿತ್ತು. ಇಂದು ನಾವು ಅಂಬೇಡ್ಕರ್ ಅವರನ್ನು ಹೃದಯದಲ್ಲಿಟ್ಟುಕೊಂಡು ಪೂಜಿಸುತ್ತಿದ್ದೇವೆ, ಆದರೆ ಅವರ ವಿಚಾರಗಳನ್ನು ಅಳವಡಿಸಿಕೊಳ್ಳುವಲ್ಲಿ, ಪಾಲಿಸುವಲ್ಲಿ ಹಿಂದುಳಿದ್ದಿದ್ದೇವೆ. ಸಂಶೋಧನೆಗಳಲ್ಲಿ ಮೇಲ್ನೋಟಕ್ಕೆ ಮಾತ್ರ ಅಂಬೇಡ್ಕರ್ ಅವರ ಉಲ್ಲೇಖ ಕಂಡು ಬರುತ್ತಿದ್ದು, ಅವರ ಒಳಗಿನ ಅಂತಃಸತ್ವಗಳ ಬಗ್ಗೆ ಚರ್ಚಿಸಿದ್ದು ತುಂಬಾ ಕಡಿಮೆ. ಇನ್ನು ಮುಂದಾದರೂ ಅಂಬೇಡ್ಕರ್ ಅವರ ವಿಚಾರಗಳನ್ನು, ಚಿಂತನೆಗಳನ್ನು ವರ್ಷವಿಡಿ ಆಳವಾಗಿ ಅಧ್ಯಯನ ಮಾಡುವಂತಾಗಲಿ ಎಂದು ಆಶಿಸಿದರು.




ದಲಿತ ಸಂಸ್ಕೃತಿ ಅಧ್ಯಯನ ಪೀಠದ ವತಿಯಿಂದ ಹಮ್ಮಿಕೊಂಡಿದ್ದ ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 68ನೇ ಮಹಾ ಪರಿನಿಬ್ಬಾಣ ದಿನಾಚರಣೆ ಕಾರ್ಯಕ್ರಮದಲ್ಲಿ ಕುಲಪತಿಗಳಾದ ಡಾ. ಡಿ.ವಿ. ಪರಮಶಿವಮೂರ್ತಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕನ್ನಡ ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ **ಡಾ. ಡಿ.ವಿ. ಪರಮಶಿವಮೂರ್ತಿ** ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ, ಬುದ್ದ ಮತ್ತು ಅಂಬೇಡ್ಕರ್ ಅವರು ಆತ್ಮವಂಚನೆ ಮತ್ತು ಸಮುದಾಯ ವಂಚನೆಗಳನ್ನು ತೊರೆದವರು. ಆದರೆ ಇಂದು ನಾವು ಎಷ್ಟೇ ವಿದ್ಯಾವಂತರಾದರೂ, ಬುದ್ಧಿವಂತರಾದರೂ ಆತ್ಮವಂಚನೆ ಮತ್ತು ಸಮುದಾಯದ ವಂಚನೆಯನ್ನು ಮಾಡಿಕೊಂಡು ಬಂದಿದ್ದೇವೆ. ನಮ್ಮತನವನ್ನು ಮರೆತು, ಮೊದಲು ನಾನು ಸರಿಯಾಗಬೇಕೆಂಬುದನ್ನು ಬಿಟ್ಟು, ಸಮಾಜ ಸರಿಯಾಗಲಿ ಎಂದು ಆಶಿಸುತ್ತಿದ್ದೇವೆ. ಇದು ಸರಿಯಾದ ಆಲೋಚನೆಯಲ್ಲ. ಮೊದಲು ನಾವು ಸರಿಯಾದರೆ, ಸಮಾಜ ತಾನಾಗಿಯೇ ಸರಿಯಾಗುತ್ತದೆ ಎಂದರು.

ದಲಿತ ಸಂಸ್ಕೃತಿ ಅಧ್ಯಯನ ಪೀಠದ ಸಂಚಾಲಕರಾದ **ಡಾ.ಚಿನ್ನಸ್ವಾಮಿ ಸೋಸಲೆ** ಅವರು ಪ್ರಾಸ್ತಾವಿಕವಾಗಿ ಮಾತನಾಡುತ್ತ, ಆಧುನಿಕ ಭಾರತದ ಬಹುದೊಡ್ಡ ಅನುಭಾವಿ ಅಂಬೇಡ್ಕರ್. ಸಾಂಪ್ರದಾಯಿಕ ಭಾರತವನ್ನು ವೈಜ್ಞಾನಿಕ ಭಾರತವನ್ನಾಗಿ

ರೂಪಿಸುವಲ್ಲಿ ಅಂಬೇಡ್ಕರ್ ಅವರ ಪಾತ್ರ ಮಹತ್ವದ್ದು. ಅಂಬೇಡ್ಕರ್ ಅವರ ನಡೆಸಿದ ಮಹಾದ್ ಕೆರೆ ಚಳುವಳಿ, ಕಾಳರಾಂ ದೇವಾಲಯ ಪ್ರವೇಶ ಹೋರಾಟಕ್ಕೆ 100 ವರ್ಷ ತುಂಬುವ ಆಸುಪಾಸಿನಲ್ಲಿದ್ದರೂ ಇಂದಿಗೂ ಜಾತಿ ಕಾರಣದಿಂದ ನಡೆಯುತ್ತಿರುವ ದೌರ್ಜನ್ಯ ಪ್ರಕರಣಗಳು ಜೀವಂತವಾಗಿವೆ. ಈ ಹಿನ್ನೆಲೆಯಲ್ಲಿ ತಳ ಸಮುದಾಯಗಳು ಪ್ರಜ್ಞಾವಂತರಾಗಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಎಲ್ಲ ನಿಕಾಯಗಳ ಡೀನರು, ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿಗಳು, ಸಂಶೋಧನಾರ್ಥಿಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಚರಿತ್ರೆ ಅಧ್ಯಯನ ವಿಭಾಗದ ಸಂಶೋಧನಾರ್ಥಿ ಸಾವಿತ್ರಿ ಅವರು ನಿರೂಪಿಸಿ, ವಂದಿಸಿದರು.


ನಂ. 1 ಕನ್ನಡ ದಿನಪತ್ರಿಕೆ
ವಿಜಯವಾಣಿ
VIJAYAVANI » GANGAVATI
ಶನಿವಾರ 7 ಡಿಸೆಂಬರ್ 2024
7 DECEMBER 2024

ಮಾಹಿತಿಕೇಂದ್ರ

## ಭಾರತಕ್ಕೆ ಡಾ.ಅಂಬೇಡ್ಕರ್ ನೀಡಿದ ಕೊಡುಗೆ ಅನನ್ಯ

ಕನ್ನಡ ವಿವಿ ಕುಲಪತಿ ಡಾ.ಪರಮಶಿವಮೂರ್ತಿ ಅಭಿಪ್ರಾಯ


## ಸಮಾನತೆಗೆ ಸಂವಿಧಾನ ಸಹಕಾರಿ: ಪ್ರೊ|ಗಣೇಶ್

ಕನ್ನಡ ವಿವಿಯಲ್ಲಿ ಡಾ|ಬಿ.ಆರ್. ಅಂಬೇಡ್ಕರ್ ಮಹಾಪರಿನಿರ್ವಾಣ ದಿನ ■ ಸಂವಿಧಾನದಲ್ಲಿ ವೈಜ್ಞಾನಿಕ ಮನೋಧರ್ಮಕ್ಕೆ ಆದ್ಯತೆ

ಉದಯವಾಣಿ
ಶನಿವಾರ, ಡಿಸೆಂಬರ್ 7, 2024

ಮಾಹಿತಿಕೇಂದ್ರ


## ಸಮಾನತೆಯ ಪ್ರತಿಪಾದಕ ಡಾ. ಬಿ.ಆರ್. ಅಂಬೇಡ್ಕರ್

ಡಾ. ಬಿ.ಆರ್. ಅಂಬೇಡ್ಕರ್ ಅವರ 68ನೇ ಮಹಾಪರಿನಿಬ್ಬಾಣ ದಿನಾಚರಣೆಗೆ ಚಾಲನೆ ನೀಡಿದ ಪ್ರೊ. ಮೊಗಳ್ಳಿ ಗಣೇಶ್

ಮಾಹಿತಿಕೇಂದ್ರ

ಕನ್ನಡಪ್ರಭ
ಶನಿವಾರ 7.12.2024

ಸಾಹಿತಿಕೇಂದ್ರ

ಪ್ರಜಾವಾಣಿ ಶನಿವಾರ • ಡಿಸೆಂಬರ್ 7, 2024

## ಹಂಪಿ ಕನ್ನಡ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಪ್ರೊ.ಮೊಗಳ್ಳಿ ಗಣೇಶ್

# ಮಹಾ ಮಾನವತಾವದಿ ಅಂಬೇಡ್ಕರ್

ಪ್ರಜಾವಾಣಿ ವಾರ್ತೆ



ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಅಂಬೇಡ್ಕರ್ ಅವರ ಮಹಾ ಪರಿನಿರ್ವಾಣ ದಿನದ ಅಂಗವಾಗಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ಅರ್ಪಿಸಲಾಯಿತು

**ಹೊಸಪೇಟೆ (ವಿಜಯನಗರ):** ಮಹಾ ಪರಿನಿರ್ವಾಣ ಎಂದರೆ ಎಚ್ಚರಿಕೆ, ಹೊಸ ಬಗೆಯ ಶೋಧ. ಜೀವನದ ಲೌಕಿಕ ಜಂಜಾಟಗಳಿಂದ ಮುಕ್ತರಾಗಿ ಸ್ವಾತಂತ್ರ್ಯವನ್ನು ಪಡೆದುಕೊಳ್ಳುವುದೇ ಪರಿನಿರ್ವಾಣವಾಗಿದೆ. ಇದು ಬುದ್ಧ ಮತ್ತು ಅಂಬೇಡ್ಕರ್ ಅವರಿಗೆ ಮಾತ್ರ ಸೀಮಿತವಾಗದೇ, ಪ್ರತಿಯೊಬ್ಬರಲ್ಲೂ ಎಚ್ಚರಿಕೆಯ ಪರಿನಿರ್ವಾಣ ನಿರ್ಮಾಣಗೊಳ್ಳಬೇಕು ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಪ್ರೊ.ಮೊಗಳ್ಳಿ ಗಣೇಶ್ ಹೇಳಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯ ಕ್ಯಾಂಪಸ್‌ನಲ್ಲಿ ಶುಕ್ರವಾರ ದಲಿತ ಸಂಸ್ಕೃತಿ ಅಧ್ಯಯನ ಪೀಠದ ವತಿಯಿಂದ ಹಮ್ಮಿಕೊಂಡಿದ್ದ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 68ನೇ ಮಹಾಪರಿನಿರ್ವಾಣ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

'ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಬುದ್ಧನ ಕಾರುಣ್ಯ ಮತ್ತು ವೈಜ್ಞಾನಿಕ ಮನೋಧರ್ಮಕ್ಕೆ ಒತ್ತು ನೀಡಿದ್ದಾರೆ. ಜನ ಸಾಮಾನ್ಯರ ಅಭಿವ್ಯಕ್ತಿ ಸ್ವಾತಂತ್ರ್ಯ ಹಾಗೂ ಸಮಾನತೆಗೆ ಮಹತ್ವ ನೀಡಿದ್ದಾರೆ. ಸಂವಿಧಾನದಲ್ಲಿ ಮನುಷ್ಯತ್ವಕ್ಕೆ, ಮನುಷ್ಯ ಸಮಾನತೆಗೆ ಮತ್ತು ಮಹಿಳೆಯರ ಘನತೆಯ ಬದುಕಿಗೆ ಅವಕಾಶ ಮಾಡಿಕೊಟ್ಟ ಮಹಾ ಮಾನವತವಾದಿ ಅಂಬೇಡ್ಕರ್' ಎಂದು ಹೇಳಿದರು.

ಕುಲಸಚಿವ ಪ್ರೊ.ವಿಜಯ್ ಪೂಣಚ್ಚ ತಂಬಂಡ ಮಾತನಾಡಿ, 'ಅಂಬೇಡ್ಕರ್ ಎಲ್ಲ ವಿಷಯಗಳಲ್ಲೂ ಪರಿಣಿತರಾಗಿದ್ದಾರು. ಹಲವಾರು ಭಾಷೆಗಳನ್ನು ಕರಗತ ಮಾಡಿಕೊಂಡಿದ್ದರು. ದೇಶದ ಅರ್ಥವ್ಯವಸ್ಥೆ, ಸಾಮಾಜಿಕ ವ್ಯವಸ್ಥೆ, ಜನ ಸಮುದಾಯಗಳ ಮತ್ತು ಮಹಿಳೆಯರ ಸ್ಥಾನಮಾನ ಹೇಗಿರಬೇಕು ಎಂಬ ಸ್ಪಷ್ಟ ಕಲ್ಪನೆ ಅವರಿಗಿತ್ತು' ಎಂದರು.

ಕುಲಪತಿ ಪ್ರೊ.ಡಿ.ವಿ.ಪರಮಶಿವಮೂರ್ತಿ ಅಧ್ಯಕ್ಷತೆ ವಹಿಸಿ ಮಾತನಾಡಿ, 'ಬುದ್ಧ ಮತ್ತು ಅಂಬೇಡ್ಕರ್ ಅವರು ಆತ್ಮವಂಚನೆ ಮತ್ತು ಸಮುದಾಯ ವಂಚನೆಗಳನ್ನು ತೋರಿದವರು. ಆದರೆ ಇಂದು ನಾವು ಎಷ್ಟೇ ವಿದ್ಯಾವಂತರಾದರೂ, ಬುದ್ಧಿವಂತರಾದರೂ ಆತ್ಮವಂಚನೆ ಮತ್ತು ಸಮುದಾಯದ ವಂಚನೆಯನ್ನು ಮಾಡಿಕೊಂಡು ಬಂದಿದ್ದೇವೆ' ಎಂದು ಹೇಳಿದರು.

ಅಧ್ಯಯನ ಪೀಠದ ಸಂಚಾಲಕ ಪ್ರೊ.ಚಿನ್ನಸ್ವಾಮಿ ಸೋಸಲೆ ಪ್ರಾಸ್ತಾವಿಕ ಮಾತನಾಡಿ, ಆಧುನಿಕ ಭಾರತದ ಬಹುದೊಡ್ಡ ಅನುಭಾವಿ ಅಂಬೇಡ್ಕರ್. ಸಾಂಪ್ರದಾಯಿಕ ಭಾರತವನ್ನು ವೈಜ್ಞಾನಿಕ ಭಾರತವನ್ನಾಗಿ ರೂಪಿಸುವಲ್ಲಿ ಅಂಬೇಡ್ಕರ್ ಅವರ ಪಾತ್ರ ಮಹತ್ವದ್ದು ಎಂದರು.

---

ಸಾಹಿತಿಕೇಂದ್ರ

ಶನಿವಾರ,7 ಡಿಸೆಂಬರ್ 2024, ಗಂಗಾವತಿ
ವಿಜಯ ಕರ್ನಾಟಕ VK

**ವಿಜಯನಗರ (ಹೊಸಪೇಟೆ):** ಜಿಲ್ಲಾದ್ಯಂತ ಸರಕಾರಿ ಕಚೇರಿ, ಶಾಲಾ, ಕಾಲೇಜು ಹಾಗೂ ಸಂಘ-ಸಂಸ್ಥೆಗಳಿಂದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುಣ್ಯತಿಥಿ ನಿಮಿತ್ತ ಮಹಾ ಪರಿನಿರ್ವಾಣ ದಿನ ಶುಕ್ರವಾರ ಆಚರಿಸಲಾಯಿತು.

**ವಿವಿಯಲ್ಲಿ ಆಚರಣೆ:** ಮಹಿಳೆಯರ ಘನತೆಯ ಬದುಕಿಗೆ ಅವಕಾಶ ಮಾಡಿಕೊಟ್ಟ ಮಾನವತವಾದಿ ಡಾ. ಅಂಬೇಡ್ಕರ್ ಎಂದು ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಮೊಗಳ್ಳಿ ಗಣೇಶ್ ಹೇಳಿದರು. ಕನ್ನಡ ವಿಶ್ವವಿದ್ಯಾಲಯದ ಪಂಪ ಸಭಾಂಗಣದಲ್ಲಿ ದಲಿತ ಸಂಸ್ಕೃತಿ ಅಧ್ಯಯನ ಪೀಠದಿಂದ ನಡೆದ ಅಂಬೇಡ್ಕರ್ ಅವರ ಮಹಾಪರಿನಿರ್ವಾಣ ದಿನಾಚರಣೆಯಲ್ಲಿ ಉಪನ್ಯಾಸ ನೀಡಿದರು. ಕುಲಸಚಿವ ಡಾ. ವಿಜಯ್ ಪೂಣಚ್ಚ ತಂಬಂಡ, ಡಾ. ಚಿನ್ನಸ್ವಾಮಿ ಸೋಸಲೆ ಇದ್ದರು.



**ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ ಅವರು ಡಾ.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.**

# ದಲಿತ ಸಂಸ್ಕೃತಿ ಅಧ್ಯಯನ ಪೀಠ

## ಕನ್ನಡ ವಿಶ್ವವಿದ್ಯಾಲಯ, ಹಂಪಿ

ವಿದ್ಯಾರಣ್ಯ - ೫೮೩ ೨೭೬

**ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್‌ಅವರ**
**೬೮ನೇ ಮಹಾಪರಿನಿಬ್ಬಾಣ ದಿನಾಚರಣೆ**



ಪ್ರಾಸ್ತಾವಿಕ

**ಪ್ರೊ. ಎನ್. ಚಿನ್ನಸ್ವಾಮಿ ಸೋಸಲೆ**
ಹಿರಿಯ ಪ್ರಾಧ್ಯಾಪಕರು ಹಾಗೂ
ಸಂಚಾಲಕರು
ದಲಿತ ಸಂಸ್ಕೃತಿ ಅಧ್ಯಯನ ಪೀಠ

ಉಪನ್ಯಾಸ

**ಪ್ರೊ. ಮೊಗಳ್ಳಿ ಗಣೇಶ್**
ವಿಶ್ರಾಂತ ಪ್ರಾಧ್ಯಾಪಕರು ಹಾಗೂ
ಚಿಂತಕರು
ಕನ್ನಡ ವಿಶ್ವವಿದ್ಯಾಲಯ, ಹಂಪಿ

ಅಧ್ಯಕ್ಷತೆ

**ಪ್ರೊ. ಡಿ.ವಿ. ಪರಮಶಿವಮೂರ್ತಿ**
ಮಾನ್ಯ ಕುಲಪತಿಗಳು
ಕನ್ನಡ ವಿಶ್ವವಿದ್ಯಾಲಯ, ಹಂಪಿ

ದಿನಾಂಕ : ೦೬.೧೨.೨೦೨೪ ಶುಕ್ರವಾರ
ಬೆಳಗ್ಗೆ ೧೧.೦೦ ಗಂಟೆಗೆ
ಸ್ಥಳ : ಪಂಪಾ ಸಭಾಂಗಣ, ಕ.ವಿ.ವಿ. ಹಂಪಿ

ತಮಗೆ ಆದರದ ಸ್ವಾಗತ

| | |
|---|---|
| ಪ್ರೊ.ಎನ್. ಚಿನ್ನಸ್ವಾಮಿ ಸೋಸಲೆ | ಪ್ರೊ. ವಿಜಯ್ ಪೂಣಚ್ಚ ತಂಬಂಡ |
| ಸಂಚಾಲಕರು, ದ.ಸಂ.ಅ.ಪೀಠ | ಕುಲಸಚಿವರು |

**ಪ್ರೊ. ಎನ್. ಚಿನ್ನಸ್ವಾಮಿ ಸೋಸಲೆ**
ಪ್ರಾಧ್ಯಾಪಕರು ಹಾಗೂ ಸಂಚಾಲಕರು
ಚರಿತ್ರೆ ವಿಭಾಗ ಹಾಗೂ ದಲಿತ ಸಂಸ್ಕೃತಿ ಅಧ್ಯಯನ ಪೀಠ
ಕನ್ನಡ ವಿಶ್ವವಿದ್ಯಾಲಯ, ಹಂಪಿ
ವಿದ್ಯಾರಣ್ಯ–583276
ಮೊ: 9448303876